## ದಕ್ಷಿಣ ಕನ್ನಡ ಜಿಲ್ಲೆಯ ತುಂಬೆಯಲ್ಲಿ ತೋಟಗಾರಿಕಾ ಇಲಾಖೆಗೆ ಸೇರಿದ ಜಮೀನಿನ ವಿಸ್ತೀರ್ಣ

**(2124):** ಶ್ರೀ ಎ. ರುಕ್ಮಯ ಪೂಜಾರಿ (ವಿಟ್ಲ):– ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ದಕ್ಷಿಣ ಕನ್ನಡ ಜಿಲ್ಲೆಯ ತುಂಬೆಯಲ್ಲಿ ತೋಟಗಾರಿಕಾ ಇಲಾಖೆಗೆ ಸೇರಿದ ಜಮೀನಿನ ವಿಸ್ತೀರ್ಣವೆಷ್ಟು;

ಆ. ಈ ಜಮೀನನ್ನು ಬೇರೆ ಉದ್ದೇಶಕ್ಕೆ ಉಪಯೋಗಿಸುವ ಆಲೋಚನೆಯು ಸರ್ಕಾರಕ್ಕಿದೆಯೇ;

ಇ. ಈ ಜಮೀನನ್ನು ಅಭಿವೃದ್ಧಿಪಡಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳಾವುವು ?

ಶ್ರೀ ಎ. ಕೃಷ್ಣಪ್ಪ (ತೋಟಗಾರಿಕೆ ರಾಜ್ಯ ಸಚಿವರು):–

ಅ. 26 ಎಕರೆ – 29 ಗುಂಟೆ

ಆ. ಇಲ್ಲ

ಇ. ಪ್ರತಿ ವರ್ಷ ಈ ಕ್ಷೇತ್ರದಲ್ಲಿ ಮಳೆಗಾಲದಲ್ಲಿ 6 ಎಕರೆ ಪ್ರದೇಶದಲ್ಲಿ, ಬೇಸಿಗೆ ಕಾಲದಲ್ಲಿ 5 ಎಕರೆ ಪ್ರದೇಶದಲ್ಲಿ ತರಕಾರಿ ಬೀಜೋತ್ಪಾದನೆ ಮಾಡಲಾಗುತ್ತಿದೆ. ಉಳಿಕೆ ಪ್ರದೇಶದಲ್ಲಿ ಮುಂಬರುವ ವರ್ಷಗಳಲ್ಲಿ ಹಂತ, ಹಂತವಾಗಿ ತೆಂಗು, ಅಡಿಕೆ, ಸಾಂಬಾರು ಬೆಳೆಗಳನ್ನು ಹಾಕಿ ಅಭಿವೃದ್ಧಿಪಡಿಸಲಾಗುವುದು.

## ಉತ್ತರ ಕನ್ನಡ ಜಿಲ್ಲೆಯ ಪಿ.ಎಲ್.ಡಿ. ಬ್ಯಾಂಕ್ ಹಿಡುವಳಿಯ ಕುರಿತು

**(2102):** ಶ್ರೀ ಆರ್.ಎನ್. ನಾಯಕ್ (ಭಟ್ಕಳ):– ಮಾನ್ಯ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಉತ್ತರ ಕನ್ನಡ ಜಿಲ್ಲೆಯ ಪಿ.ಎಲ್.ಡಿ. ಬ್ಯಾಂಕುಗಳಲ್ಲಿ ಅತಿ ಕಡಿಮೆ ಅಂದರೆ ಎಷ್ಟು ಬಾಗಾಯಿತ ಹಿಡುವಳಿ ಇರುವವರಿಗೆ ಸಾಲ ನೀಡಲಾಗುತ್ತದೆಯೇ;

ಆ. ಸಧ್ಯ ಇರುವ ಪದ್ಧತಿಯನ್ನು ಬದಲಿಸಿ ಹಿಡುವಳಿಯ ವಿಲೇಯನ್ನು ಇನ್ನೂ ಕಡಿಮೆ ಮಾಡಲು ಸಾಧ್ಯವೇ ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಸಹಕಾರ ಸಚಿವರು):–

ಅ. ಅರ್ಧ ಎಕರೆ.

ಆ. ವಿಶೇಷ ಸಂದರ್ಭಗಳಲ್ಲಿ ಅಂದರೆ ವಿವಿಧೋದ್ದೇಶಗಳ ಯೋಜನೆಗಳಲ್ಲಿ ಯೋಜನೆಯ ಅರ್ಹತೆಯ ಮೇಲೆ ಕ್ಷೇತ್ರ ನಡುವಳಿಯ ಮಿತಿಗಿಂತ 5 ಗುಂಟೆಯವರೆಗೆ ಕಡಿಮೆ ಇದ್ದರೂ ಸಾಲ ನೀಡಲೂ ಪರಿಗಣಿಸಲಾಗುವುದು.

## ಕನಕಪುರ ಎ.ಪಿ.ಎಂ.ಸಿ. ಮಾರ್ಕೆಟ್ ಯಾರ್ಡ್ ಪ್ರಾರಂಭ

**(2147):** ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ):– ಮಾನ್ಯ ವ್ಯವಸಾಯೋತ್ಪನ್ನ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?